# ಬಿ.ಬಿ.ಎಂ.ಪಿ ಮಹದೇವಪುರ ವಲಯ, ವಾರ್ಡ್ ಸಂಖ್ಯೆ.53, ಬಸವನಪುರ

## ವಾರ್ಡ್ ಸಮಿತಿಯ ನಡವಳಿಗಳು

******

ದಿನಾಂಕ: 05/01/2019

ಸಭೆಯಲ್ಲಿ ಹಾಜರಿದ್ದ ಸದಸ್ಯರುಗಳು ಹಾಗೂ ಅಧಿಕಾರಿಗಳು

1. ಶ್ರೀ. ಬಿ.ಎನ್.ಜಯಪ್ರಕಾಶ್
2. ಶ್ರೀ. ಆಂಜನಪ್ಪ
3. ಶ್ರೀ. ಎಂ.ರಾಮಚಂದ್ರ
4. ಶ್ರೀಮತಿ. ಇಂದ್ರಾಣಿ
5. ಶ್ರೀಮತಿ ಗುಲ್ನಾಜ್
6. ಶ್ರೀಮತಿ. ಗಿರಿಜ.ಕೆ
7. ಕರ್ಣ್ಣಶ್ರೀ ವೆಲ್‌ಫೇರ್ ಅಸೋಸಿಯೇಷನ್
8. ಶೈನ್ ರೆಸಿಡೆನ್ಶಿಯಲ್ ವೆಲ್‌ಫೇರ್ ಅಸೋಸಿಯೇಷನ್
9. ಶ್ರೀ. ಕೃಷ್ಣಮೂರ್ತಿ
10. ಶ್ರೀ. ವಿ.ಹೆಚ್.ಉದಯ್‌ಕುಮಾರ್
11. ಶ್ರೀ. ಡಿ.ಎಸ್.ವೆಂಕಟೇಶ್

**ಹಾಜರಿದ್ದ ಅಧಿಕಾರಿಗಳು**

1. ಶ್ರೀ. ವಿನಯ್. ಕೆ, ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ.53, ಬಸವನಪುರ.
2. ಶ್ರೀ. ರಾಘವೇಂದ್ರ, ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ.53, ಬಸವನಪುರ.

ದಿನಾಂಕ **05/01/2019** ರಂದು ಕೆ.ಆರ್.ಪುರ ವಿಧಾನಸಭಾ ಕ್ಷೇತ್ರದ, ಬಿ.ಬಿ.ಎಂ.ಪಿ ಮಹದೇವಪುರ ವಲಯದ ವಾರ್ಡ್ ಸಂಖ್ಯೆ.53, ಬಸವನಪುರದ ವಾರ್ಡ್ ಸಮಿತಿಯ ಸಭೆಯನ್ನು ಮಾನ್ಯ ಅಧ್ಯಕ್ಷರು ವಾರ್ಡ್ ಸಮಿತಿ ಮತ್ತು ಬಿ.ಬಿ.ಎಂ.ಪಿ ಸದಸ್ಯರಾದ ಶ್ರೀ. ಬಿ.ಎನ್.ಜಯಪ್ರಕಾಶ್ ಮತ್ತು ವಾರ್ಡ್ ಸಮಿತಿ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರಾದ ಶ್ರೀ. ವಿನಯ್.ಕೆರವರ ಸಮ್ಮುಖದಲ್ಲಿ ನಡೆಸಲಾಯಿತು.

Scanned by CamScanner

ಸದರಿ ಸಭೆಯಲ್ಲಿ ಮೊಟ್ಟಮೊದಲಿಗೆ ಎಲ್ಲಾ ಸದಸ್ಯರ ಪರಸ್ಪರ ಪರಿಚಯ ಮಾಡಿಕೊಂಡು, ಮಾನ್ಯ ಸದಸ್ಯರು ವಾರ್ಡ್‌ನಲ್ಲಿ ಮಾಡಿರುವಂತಹ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಸವಿವರವಾಗಿ ತಿಳಿಸಲಾಯಿತು.

ಮೊದಲಿಗೆ ಕಸ ವಿಲೇವಾರಿಯ ಬಗ್ಗೆ ಚರ್ಚಿಸಲಾಗಿ, ವಾರ್ಡ್‌ನಲ್ಲಿ ಉತ್ಪತ್ತಿಯಾಗುವ ಘನತ್ಯಾಜ್ಯದ ಬಗ್ಗೆ ಚರ್ಚಿಸಲಾಗಿ ಕಸ ವಿಂಗಡಣೆ ಮತ್ತು ವಿಲೇವಾರಿಗೆ ಪ್ರಸ್ತುತ ಇರುವ 20 ಆಟೋ, 01 ಕಾಂಪ್ಯಾಕ್ಟರ್ ಹಾಗೂ 80 ಜನ ಪೌರಕಾರ್ಮಿಕರಿಂದ ಸ್ವಚ್ಛತಾ ಕಾರ್ಯಕ್ರಮವನ್ನು ಸಮರ್ಪಕವಾಗಿ ನಿರ್ವಹಿಸಲು ಸಾದ್ಯವಿಲ್ಲ, ಕಾರಣ ವಾರ್ಡ್ ವ್ಯಾಪ್ತಿಯಲ್ಲಿ 21000 ಕ್ಕೂ ಹೆಚ್ಚು ಮನೆಗಳು ಹಾಗೂ 90000 ಕ್ಕೂ ಹೆಚ್ಚು ಜನಸಂಖ್ಯೆಯನ್ನು ಹೊಂದಿರುತ್ತದೆ. ಆದಕಾರಣ ಹೆಚ್ಚುವರಿಯಾಗಿ 01 ಕಾಂಪ್ಯಾಕ್ಟರ್ ಹಾಗೂ ಮನೆ ಮನೆಯಿಂದ ಕಸವನ್ನು ಸಂಗ್ರಹಿಸಲು 10ಆಟೋ ಟಿಪ್ಪರ್‌ಗಳ ಅವಶ್ಯಕತೆ ಇದೆ ಎಂದು ಮಾನ್ಯ ಜಂಟಿ ಆಯುಕ್ತರು, ಮಹದೇವಪುರರವರಿಗೆ ಮನವಿಯನ್ನು ಸಲ್ಲಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

2017–18ನೇ ಸಾಲಿನ ಪಿ.ಓ.ಡಬ್ಲ್ಯೂ ಅನುಧಾನದಲ್ಲಿ ತೆಗೆದುಕೊಂಡಿರುವ ರಸ್ತೆ ಮತ್ತು ಚರಂಡಿ ಅಭಿವೃದ್ಧಿ ಕಾಮಗಾರಿಗಳಿಗೆ ಗುದ್ದಲಿ ಪೂಜೆಯನ್ನು ಮಾಡುವ ಬಗ್ಗೆ ಚರ್ಚಸಲಾಯಿತು. ತದ ನಂತರ 2017–18ನೇ ಸಾಲಿನಲ್ಲಿ ನೀರು ಸರಬರಾಜಿಗೆ ನೀಡಿರುವ ಅನುದಾನದಲ್ಲಿ, ವಾರ್ಡ್‌ನಲ್ಲಿ ನೀರಿನ ಸಮಸ್ಯೆ ಇರುವ ಕಡೆ ಬೋರ್‌ವೆಲ್‌ಗಳನ್ನು ಕೊರೆಸಲು ತೀರ್ಮಾನಿಸಲಾಯಿತು. ಈಗಾಗಲೇ ಪ್ರಗತಿಯಲ್ಲಿರುವ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ಆದಷ್ಟು ಬೇಗ ಮುಕ್ತಾಯಗೊಳಿಸಲು ತೀರ್ಮಾನಿಸಲಾಯಿತು. ಸದಸ್ಯರು ಆಗಿಂದಾಗೆ ಕಾಮಗಾರಿಗಳನ್ನು ಪರಿವೀಕ್ಷಿಸಿ ಉತ್ತಮ ಸಲಹೆಗಳನ್ನು ಹಾಗೂ ಅತ್ಯವಶ್ಯಕವಾಗಿರುವ ಕಾಮಗಾರಿಗಳನ್ನು ಗುರುತಿಸಿ ಮುಂದಿನ ಸಭೆಯಲ್ಲಿ ತಿಳಿಸಲು ಕೋರಲಾಯಿತು.

ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಮಾನ್ಯ ಅಧ್ಯಕ್ಷರು ವಾರ್ಡ್ ಸಮಿತಿ
ಮತ್ತು ಬಿ.ಬಿ.ಎಂ.ಪಿ ಸದಸ್ಯರು

B.N. JAYAPRAKASH
Corporator BBMP
Ward No. 53, Basavanapura

ವಾರ್ಡ್ ಸಮಿತಿ ಕಾರ್ಯದರ್ಶಿಗಳು
ಹಾಗೂ ಸಹಾಯಕಅಭಿಯಂತರರು

Scanned by CamScanner